ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001**

E-Mail: prydirector.edu.sgkar@nic.in

ಸಂಖ್ಯೆ : ಸಿ7(8)ಪ್ರಾಶಿಅ/ಆರ್.ಟಿ.ಇ/ಶುಲ್ಕ ಮರುಪಾವತಿ/2016-17 ದಿನಾಂಕ: 10-01-2017

## : : ಸುತ್ತೋಲೆ : :

ವಿಷಯ: 2016-17ನೇ ಸಾಲಿನ ಆನ್‌ಲೈನ್ ಶುಲ್ಕಮರುಪಾವತಿ ವಿಳಂಬವಾಗುತ್ತಿರುವುದರಿಂದ ಪ್ರಕ್ರಿಯೆಯನ್ನು ತ್ವರಿತವಾಗಿ ಪೂರ್ಣಗೊಳಿಸಲು ಅಗತ್ಯ ಕ್ರಮ ತೆಗೆದುಕೊಳ್ಳುವ ಬಗ್ಗೆ.

ಉಲ್ಲೇಖ:
1. ದಿನಾಂಕ: 09-01-2017ರಂದು ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಖೆ, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ, ಕರ್ನಾಟಕ ಸರ್ಕಾರ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭಾ ಸೂಚನೆ.
2. ದಿನಾಂಕ: 19/12/2016 ರಲ್ಲಿ ಮಾನ್ಯ ಆಯುಕ್ತರ ಅಧ್ಯಕ್ಷತೆಯಲ್ಲಿ ಉಪನಿರ್ದೇಶಕರು(ಆಡಳಿತ) ಮತ್ತು ತಾಲ್ಲೂಕು/ವಲಯ ಕ್ಷೇತ್ರಶಿಕ್ಷಣಾಧಿಕಾರಿಗಳೊಂದಿಗೆ ನಡೆದ ರಾಜ್ಯ ಮಟ್ಟದ ವಿಡಿಯೋ ಕಾನ್ಫರೆನ್ಸ್.
3. ದಿನಾಂಕ:25/11/2016 ರಂದು ಮಾನ್ಯ ಸಹನಿರ್ದೇಶಕರು (ಆಡಳಿತ) ಇವರ ಅಧ್ಯಕ್ಷತೆಯಲ್ಲಿ ಖಜಾನೆ ಇಲಾಖೆಯ ಸಹಯೋಗದೊಂದಿಗೆ ನಡೆದ ಖಜಾನೆ-2 ತರಬೇತಿ.
4. ದಿನಾಂಕ:21/11/2016 ರಂದು ಮಾನ್ಯ ಆಯುಕ್ತರ ಅಧ್ಯಕ್ಷತೆಯಲ್ಲಿ ಉಪನಿರ್ದೇಶಕರು(ಆಡಳಿತ) ಮತ್ತು ತಾಲ್ಲೂಕು/ವಲಯ ಕ್ಷೇತ್ರಶಿಕ್ಷಣಾಧಿಕಾರಿಗಳೊಂದಿಗೆ ನಡೆದ ರಾಜ್ಯ ಮಟ್ಟದ ವಿಡಿಯೋ ಕಾನ್ಫರೆನ್ಸ್.
5. ದಿನಾಂಕ: 16/11/2016 ರಲ್ಲಿ ಮಾನ್ಯ ಆಯುಕ್ತರ ಅಧ್ಯಕ್ಷತೆಯಲ್ಲಿ ರಾಜ್ಯ ಮಟ್ಟದಲ್ಲಿ ನಡೆದ ಜಿಲ್ಲಾ ಮಟ್ಟದ ಆರ್.ಟಿ.ಇ ನೋಡಲ್ ಅಧಿಕಾರಿಗಳು ಮತ್ತು ಪ್ರೋಗ್ರಾಮರ್‌ಗಳ ತರಬೇತಿ.
6. ದಿನಾಂಕ:14/11/2016 ರಲ್ಲಿ ನಿರ್ದೇಶಕರು(ಪ್ರಾಥಮಿಕ ಶಿಕ್ಷಣ) ಇವರ ಅಧ್ಯಕ್ಷತೆಯಲ್ಲಿ ಉಪನಿರ್ದೇಶಕರು (ಆಡಳಿತ) ಮತ್ತು ಎಲ್ಲ ಕ್ಷೇತ್ರಶಿಕ್ಷಣಾಧಿಕಾರಿಗಳೊಂದಿಗೆ ನಡೆದ ರಾಜ್ಯ ಮಟ್ಟದ ವಿಡಿಯೋ ಕಾನ್ಫರೆನ್ಸ್

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2016-17ನೇ ಸಾಲಿನ ಆನ್‌ಲೈನ್ ಮುಖಾಂತರ ಶಿಕ್ಷಣ ಹಕ್ಕು ಕಾಯಿದೆ ಸೆಕ್ಷನ್ 12(1)(ಸಿ) ಅಡಿ ದಾಖಲಾದ ಮಕ್ಕಳ ಶುಲ್ಕಮರುಪಾವತಿ ಮಾಡುವ ಬಗ್ಗೆ ಉಲ್ಲೇಖಗಳಂತೆ ಅನುಸರಿಸಬೇಕಾದ ಕ್ರಮಗಳ ಕುರಿತಂತೆ ರಾಜ್ಯ ಹಂತದಿಂದ ವಿವಿಧ ಹಂತಗಳಲ್ಲಿ ತರಬೇತಿ ನೀಡಲಾಗಿದೆ.

ತಮ್ಮ ಜಿಲ್ಲೆಗಳಲ್ಲಿ ಶಿಕ್ಷಣ ಹಕ್ಕು ಕಾಯಿದೆ ಅಡಿ ಪ್ರವೇಶ ನೀಡಿರುವ ಶಾಲೆಗಳು ಶುಲ್ಕ ಮರುಪಾವತಿಗೆ ಸಾಫ್ಟ್‌ವೇರ್‌ನಲ್ಲಿ ರಾಜ್ಯ ಹಂತದಲ್ಲಿ ನಿರೀಕ್ಷಿಸಿರುವಂತೆ ಪ್ರಗತಿ ಸಾಧಿಸಲು ಸಾಧ್ಯವಾಗಿರುವುದಿಲ್ಲ. ಈ ಬಗ್ಗೆ ಎಲ್ಲಾ ಜಿಲ್ಲಾ ಹಂತಗಳಲ್ಲಿಯೂ ಪ್ರಗತಿ ಕುಂಠಿತವಾಗಿರುತ್ತದೆ.

ಇದುವರೆವಿಗೂ ರಾಜ್ಯದ ಹಲವು ಜಿಲ್ಲೆಗಳಲ್ಲಿ ಶಾಲೆಗಳ ಹಂತದಲ್ಲಿಯೇ ಪಾಸ್‌ವರ್ಡ್ ಬದಲಾವಣೆ ಮಾಡಿಕೊಂಡಿರುವುದಿಲ್ಲ. ಈ ಶಾಲೆಗಳ ಬಗ್ಗೆ ಜಿಲ್ಲಾ ಮತ್ತು ತಾಲ್ಲೂಕು/ವಲಯ ಹಂತದಲ್ಲಿ ಮೇಲ್ವಿಚಾರಣೆ ಮಾಡದಿರುವುದನ್ನು ಆಯುಕ್ತಾಲಯ ಗಂಭೀರವಾಗಿ ಪರಿಗಣಿಸಿದೆ. ಅಂತಹ ಪ್ರಕರಣಗಳ ಬಗ್ಗೆ ಜರೂರಾಗಿ ಕ್ರಮವಹಿಸಲು ಸೂಚಿಸಿದೆ ತಪ್ಪಿದಲ್ಲಿ ತಮ್ಮ ಹಂತದಲ್ಲಿ ಮೇಲ್ವಿಚಾರಣೆ ಮಾಡದೇ ನಿರ್ಲಕ್ಷ್ಯತೆ ವಹಿಸಿರುವ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸುವುದು ಅನಿವಾರ್ಯವಾಗುತ್ತದೆ.

ಶಾಲೆಗಳ ಮಾನ್ಯತೆ ನವೀಕರಣಗೊಳಿಸದ ಕಾರಣ ಶುಲ್ಕ ಮರುಪಾವತಿಯನ್ನು ತಿರಸ್ಕರಿಸುವಂತಿಲ್ಲ. ಅಂತಹ ಶಾಲೆಗಳು ಮಾನ್ಯತೆ ನವೀಕರಣಕ್ಕಾಗಿ ಅರ್ಜಿಗಳನ್ನು ಸಲ್ಲಿಸಿದಲ್ಲಿ ಅವರಿಗೆ ಪ್ರಸ್ತುತ ಸಾಲಿನ ಶುಲ್ಕಮರುಪಾವತಿಯನ್ನು ಪಡೆಯುವ ಸಲುವಾಗಿ ಸಾಪ್‌ವೇರ್‌ನಲ್ಲಿ ಅಪ್‌ಡೇಟ್ ಮಾಡಿರುವ ಶಾಲೆಗಳಿಗೆ ಶುಲ್ಕಮರುಪಾವತಿಯ ಬಗ್ಗೆ

ನಿಯಮಾನುಸಾರ ಕ್ರಮವಹಿಸುವುದು. ಒಂದು ವೇಳೆ ಮಾನ್ಯತೆ ನವೀಕರಣಕ್ಕಾಗಿ ಅರ್ಜಿ ಸಲ್ಲಿಸದ ಶಾಲೆಗಳಿಂದ ನವೀಕರಣಕ್ಕಾಗಿ ಅರ್ಜಿಗಳನ್ನು ಸ್ವೀಕರಿಸಿ ಶುಲ್ಕಮರುಪಾವತಿಯ ಬಗ್ಗೆ ಅಗತ್ಯ ಕ್ರಮವಹಿಸುವುದು. ಈ ರೀತಿ ಮಾನ್ಯತೆ ನವೀಕರಣಕ್ಕಾಗಿ ಸ್ವೀಕರಿಸಲಾದ ಮನವಿಗಳನ್ನು ದಿನಾಂಕ:31-03-2017ರ ಒಳಗಾಗಿ ಪೂರ್ಣಗೊಳಿಸಿ ಈ ಕಾರ್ಯಲಯಕ್ಕೆ ಶಾಲಾವಾರು ಮಾಹಿತಿಯನ್ನು ಪ್ರಾಥಮಿಕ ಅನುದಾನ ಶಾಖೆಗೆ ಒದಗಿಸಲು ಸೂಚಿಸಿದೆ.

ಶುಲ್ಕಮರುಪಾವತಿಯ ಪ್ರಕ್ರಿಯೆಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಉಲ್ಲೇಖ (1) ರಂತೆ ಮಾನ್ಯ ಪ್ರಧಾನ ಕಾರ್ಯದರ್ಶಿಗಳು ಸಭೆಯಲ್ಲಿ ತಿಳಿಸಿರುವುದರಿಂದ ಈ ಕೆಳಕಂಡಂತೆ ಉಪನಿರ್ದೇಶಕರು (ಆಡಳಿತ) ಮತ್ತು ಕ್ಷೇತ್ರಶಿಕ್ಷಣಾಧಿಕಾರಿಗಳು ಕಡ್ಡಾಯವಾಗಿ ಪೂರ್ಣಗೊಳಿಸಲು ತಿಳಿಸಲಾಗಿದೆ.

1. ತಾಲ್ಲೂಕು/ವಲಯಗಳ ಕ್ಷೇತ್ರಶಿಕ್ಷಣಾಧಿಕಾರಿಗಳ ಹಂತದಲ್ಲಿ ಪ್ರತಿದಿನ 20 ಶಾಲೆಗಳ ಶುಲ್ಕಮರುಪಾವತಿಯ ಪ್ರಕ್ರಿಯನ್ನು ಪೂರ್ಣಗೊಳಿಸುವುದು.
2. ಬೆಂಗಳೂರು ಉತ್ತರ ಜಿಲ್ಲೆ ಮತ್ತು ಬೆಂಗಳೂರು ದಕ್ಷಿಣ ಜಿಲ್ಲೆಗಳ ವ್ಯಾಪ್ತಿಯ ಕ್ಷೇತ್ರಶಿಕ್ಷಣಾಧಿಕಾರಿಗಳ ಹಂತದಲ್ಲಿ ಪ್ರತಿದಿನ 30 ಶಾಲೆಗಳ ಶುಲ್ಕಮರುಪಾವತಿಯ ಪ್ರಕ್ರಿಯನ್ನು ಪೂರ್ಣಗೊಳಿಸುವುದು.
3. ಉಪನಿದೇಶಕರ ಹಂತದಲ್ಲಿ ಪ್ರತಿ ದಿನ ಒಂದು ಬ್ಯಾಚ್‌ನಲ್ಲಿ ಬಂದಿರುವ ಶಾಲೆಗಳ ಶುಲ್ಕಮರುಪಾವತಿಯ ಪ್ರಕ್ರಿಯೆಯನ್ನು ಪೂರ್ಣಗೊಳಿಸುವುದು.
4. ಆಯುಕ್ತಾಲಯದ ಹಂತದಲ್ಲಿ ಪ್ರತಿ ಜಿಲ್ಲೆಯಿಂದ ಬಂದಿರುವ ಶಾಲೆಗಳ ಶುಲ್ಕಮರುಪಾವತಿಯ ಪ್ರಕ್ರಿಯೆಯನ್ನು ಪೂರ್ಣಗೊಳಿಸುವುದು.

ಮೇಲ್ಕಂಡಂತೆ ಶುಲ್ಕ ಮರುಪಾವತಿಯ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕಾಗಿರುವುದರಿಂದ ತ್ವರಿತವಾಗಿ ಆಯಾ ಜಿಲ್ಲಾ ಮತ್ತು ತಾಲ್ಲೂಕು/ವಲಯಗಳ ಹಂತದಲ್ಲಿಮಕ್ರಮವಹಿಸಲು ಸೂಚಿಸಲಾಗಿದೆ. ರಾಜ್ಯ ಹಂತದಲ್ಲಿ ನೇಮಿಸಲಾದ ನೋಡಲ್ ಅಧಿಕಾರಿಗಳು ಜಿಲ್ಲಾ ಹಾಗೂ ತಾಲ್ಲೂಕು/ವಲಯಗಳಲ್ಲಿ ಹಂತದಲ್ಲಿ ನಿರಂತರವಾಗಿ ಅಧಿಕಾರಿಗಳ ಜೊತೆ ಸಂಪರ್ಕದಲ್ಲಿದ್ದುಕೊಂಡು ಪ್ರತಿ ದಿನದ ಮಾಹಿತಿಯನ್ನು ಕಡ್ಡಾಯವಾಗಿ ಹಾಜರುಪಡಿಸಲು ತಿಳಿಸಲಾಗಿದೆ.

ದಿನಾಂಕ:20-01-2017ರ ಒಳಗಾಗಿ ಮೊದಲನೇ ಕಂತಿನ ಶುಲ್ಕಮರುಪಾವತಿಯನ್ನು ಆಯಾ ಶಾಲೆಗಳಿಗೆ ನೇರವಾಗಿ ಖಜಾನೆ ಮೂಲಕ ಪಾವತಿಸಲು ಪೂರ್ಣ ಸಹಕಾರವನ್ನು ನೀಡಿ ಯಶಸ್ವಿಗೊಳಿಸಲು ಸೂಚಿಸಲಾಗಿದೆ. ವಿಳಂಬವಾದಲ್ಲಿ ಸಂಬಂಧಿಸಿದ ಅಧಿಕಾರಿಗಳೇ ನೇರ ಹೊಣೆಗಾರರಾಗಿರುತ್ತಾರೆ ತಿಳಿಯುವುದು.

ನಿರ್ದೇಶಕರು(ಪ್ರಾಥಮಿಕ ಶಿಕ್ಷಣ)
ಸಾರ್ವಜನಿಕ ಶಿಕ್ಷಣ ಇಲಾಖೆ
ಆಯುಕ್ತರ ಕಛೇರಿ, ಬೆಂಗಳೂರು.

**ರವರಿಗೆ,**

1. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು (ಆಡಳಿತ) ಇವರಿಗೆ ಸೂಕ್ತ ಕ್ರಮಕ್ಕಾಗಿ ಇ-ಮೇಲ್ ಮುಖಾಂತರ
2. ರಾಜ್ಯದ ಎಲ್ಲಾ ವಲಯ/ತಾಲ್ಲೂಕುಗಳ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ ಇ-ಮೇಲ್ ಮುಖಾಂತರ.
3. ರಾಜ್ಯ ಹಂತದ ಆರ್.ಟಿ.ಇ ನೋಡಲ್ ಅಧಿಕಾರಿಗಳಿಗೆ
4. ಹಿರಿಯ ಸಹಾಯಕ ನಿರ್ದೇಶಕರು, ಪ್ರಾಥಮಿಕ ಅನುದಾನ ಶಾಖೆ, ಇವರಿಗೆ ರಾಜ್ಯದಲ್ಲಿರುವ ಎಲ್ಲಾ ಜಿಲ್ಲೆಗಳಿಂದ ಶಾಲೆಗಳ ಮಾನ್ಯತೆ ಬಗ್ಗೆ ಅಗತ್ಯ ದಾಖಲೆಗಳನ್ನು ಪಡೆದು ಮಾನ್ಯತೆ ನವೀಕರಣ ಸಂಬಂಧ ಅಗತ್ಯ ಕ್ರಮವಹಿಸುವುದಕ್ಕಾಗಿ

ಪ್ರತಿಯನ್ನು:

1. ಜಂಟಿ ನಿರ್ದೇಶಕರು (ಆಡಳಿತ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ
2. ಹಿರಿಯ ಸಹಾಯಕ ನಿರ್ದೇಶಕರು, ಇ-ಗವರ್ನೆನ್ಸ್ ವಿಭಾಗ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
3. ಕಛೇರಿ ಪ್ರತಿ.